# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 164 (268)

ಸದಸ್ಯರ ಹೆಸರು : ಶ್ರೀ ವಿನಯ್ ಕಾರ್ತಿಕ ಪ್ರಕಾಶ್,
(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18.08.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕೊಟ್ಟಿಗೆಹಾರ, ಮೂಡಿಗೆರೆ ಭಾಗದಲ್ಲಿ ಇತ್ತೀಚೆಗೆ ಸುರಿದ ನಿರಂತರ ಮಳೆಯಿಂದ ಕಾಫಿ ಗಿಡಗಳಲ್ಲಿ ಕೊಳೆರೋಗ (ಬೆರಿ ರಾಟ್) ವ್ಯಾಪಕವಾಗಿ ಕಾಣಿಸಿಕೊಂಡಿದ್ದು, ಕಾಫಿ ಬೆಳೆಗಾರರು ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿದೆ.<br><br>ಕಾಫಿ ಬೆಳೆಗೆ ಸಂಬಂಧಿಸಿದ ವಿಸ್ತರಣೆ ಚಟುವಟಿಕೆ ಸೇರಿದಂತೆ ಎಲ್ಲಾ ಯೋಜನೆ/ ಕಾರ್ಯಕ್ರಮಗಳ ಅನುಷ್ಠಾನವನ್ನು ಕೇಂದ್ರೀಯ ಕಾಫಿ ಮಂಡಳಿ ವತಿಯಿಂದ ಕೈಗೊಳ್ಳಲಾಗುತ್ತಿದೆ. |
| ಆ) | ನಿರಂತರ ಮಳೆಯಿಂದ ತೋಟಗಳ ನಿರ್ವಹಣೆ ಹಾಗೂ ರೋಗ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಸಾಧ್ಯವಾಗದಿರುವುದು ಜೊತೆಗೆ ಔಷಧ ಸಿಂಪಡಣೆ ಸ್ಥಗಿತಗೊಂಡಿರುವುದರಿಂದ, ಕೊಳೆರೋಗ ಇನ್ನಷ್ಟು ವ್ಯಾಪಿಸುವ ಆತಂಕ ಎದುರಾಗಿದ್ದು, ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರ ನೆರವಿಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು; | ಕೇಂದ್ರೀಯ ಕಾಫಿ ಮಂಡಳಿಯ ವತಿಯಿಂದ ಕಾಫಿ ಬೆಳೆಗಾರರಿಗೆ ಸಕಾಲಕ್ಕೆ ಸಲಹೆ Timely advisory ಗಳನ್ನು ಕಾಫಿ ಕೃಷಿ ತರಂಗದ (Toll free No. 080-37685000) ಮೂಲಕ ನೀಡಲಾಗಿದೆ. |
| ಇ) | ಪ್ರತಿ ಹೋಬಳಿಯಲ್ಲೂ ಹಾನಿಗೊಳಗಾದ ಕಾಫಿ ತೋಟಗಳ ಸಮೀಕ್ಷೆಯನ್ನು ಕೂಡಲೇ ನಡೆಸಿ, ತುರ್ತು ನೆರವು ಮತ್ತು ಗರಿಷ್ಠ ಮಟ್ಟದ ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ? | ಪ್ರಕೃತಿ ವಿಕೋಪದಿಂದ ಕಾಫಿ ಬೆಳೆ ಹಾನಿಗೊಳಗಾದ ಸಂದರ್ಭದಲ್ಲಿ ಜಿಲ್ಲಾಡಳಿತವತಿಯಿಂದ NDRF/ SDRF ಮಾರ್ಗಸೂಚಿ ಪ್ರಕಾರ ಜಂಟಿ ಸಮೀಕ್ಷೆ ಕೈಗೊಂಡು ಪರಿಹಾರ ವಿತರಿಸಲು ಕ್ರಮವಹಿಸಲಾಗುತ್ತದೆ. ರೋಗದಿಂದ ಕಾಫಿ ಬೆಳೆ ಹಾನಿಗೊಳಗಾದಲ್ಲಿ NDRF ರಡಿ ಪರಿಹಾರ ಲಭ್ಯವಿರುವುದಿಲ್ಲ. |

ಸಂಖ್ಯೆ: HORTI 436 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು